# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 247 | Pages. 2 | Date: 12-09-2026, SATURDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 247 - ಪುಟಗಳು : 2 | 12-09-2026 ಶನಿವಾರ | Ph: 8762954248 | ದರ : ₹1


# ಸತೀಶ್ ಜಾರಕಿಹೊಳಿ ಏಳಿಗೆ ಸಹಿಸದೆ ಇ.ಡಿ. ದಾಳಿ

## ಸಚಿವ ಶಿವಲಿಂಗೇಗೌಡ ಗಂಭೀರ ಆರೋಪ | ಸತ್ಯಾಸತ್ಯತೆ ತನಿಖೆಯಿಂದ ತಿಳಿಯಲಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಚಿವ ಸತೀಶ್ ಜಾರಕಿಹೋಳಿ ಅವರ ನಿವಾಸದ ಮೇಲೆ ನಡೆದ ಜಾರಿ ನಿರ್ದೇಶನಾಲಯ (ಇ.ಡಿ.) ದಾಳಿ ಮೇಲ್ನೋಟಕ್ಕೆ ರಾಜಕೀಯ ಪ್ರೇರಿತವಾಗಿರಬಹುದೆಂಬ ಅನುಮಾನ ಸಾರ್ವಜನಿಕ ವಲಯದಲ್ಲಿ ಮೂಡಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಹೇಳಿದರು.

ಸುದ್ದಿಗಾರರೊಂದಿಗೆ ಶುಕ್ರವಾರ ಮಾತನಾಡಿ, ಸತೀಶ್ ಜಾರಕಿಹೋಳಿ ಅವರೇ ತನಿಖೆ ಎದುರಿಸುವುದಾಗಿ ಹಾಗೂ ದೊರೆತಿರುವ ಹಣದ ಬಗ್ಗೆ ಸೂಕ್ತ ಲೆಕ್ಕ ನೀಡುವುದಾಗಿ ಹೇಳಿದ್ದಾರೆ. ತನಿಖೆಯಿಂದ ಸತ್ಯಾಸತ್ಯತೆ ಹೊರಬರಬೇಕಿದ್ದು, ಸಂಪೂರ್ಣ ಮಾಹಿತಿ ಲಭ್ಯವಾಗುವವರೆಗೂ ಹೆಚ್ಚಿನ ಪ್ರತಿಕ್ರಿಯೆ ನೀಡುವುದು ಸರಿಯಲ್ಲ. ಇ.ಡಿ. ಕೇಂದ್ರ ಸರ್ಕಾರದ ಅಧೀನದಲ್ಲಿರುವ ತನಿಖಾ ಸಂಸ್ಥೆಯಾಗಿದ್ದು, ತನಿಖೆಯಲ್ಲಿ ಯಾವುದೇ ಅಂಶ ಸಿಗದಿದ್ದರೆ ಈ ದಾಳಿ ಕುರಿತು ಸಾರ್ವಜನಿಕರಲ್ಲಿ ವ್ಯಕ್ತವಾಗಿರುವ ಅನುಮಾನಗಳಿಗೆ ಮತ್ತಷ್ಟು ಬಲ ಸಿಗಬಹುದು ಎಂದರು.

ಸತೀಶ್ ಜಾರಕಿಹೋಳಿ ಅವರು ಪರಿಶಿಷ್ಟ ಪಂಗಡ ಸಮುದಾಯದಿಂದ ನಿರಂತರವಾಗಿ ಚುನಾವಣೆಯಲ್ಲಿ ಗೆದ್ದು ರಾಜ್ಯ ರಾಜಕಾರಣದಲ್ಲಿ ಉತ್ತಮ ಹೆಸರು ಗಳಿಸಿದ್ದಾರೆ. ಅವರ ರಾಜಕೀಯ ಬೆಳವಣಿಗೆಯನ್ನು ಸಹಿಸದೆ ದಾಳಿ ನಡೆಸಲಾಗಿದೆಯೇ ಎಂಬ ಪ್ರಶ್ನೆಯೂ ಕಾಡುತ್ತಿದೆ ಎಂದರು.

ಜಿಲ್ಲೆಯ ರೈತರಿಗೆ ಅನ್ಯಾಯ ಮಾಡಿ ತುಮಕೂರು ಜಿಲ್ಲೆಗೆ ಹೆಚ್ಚಿನ ಹೇಮಾವತಿ ನೀರನ್ನು ಹರಿಸಲಾಗುತ್ತಿದೆ ಎಂಬ ಮಾಜಿ ಸಚಿವ ಹಾಗೂ ಶಾಸಕ ಎ.ಮಂಜು ಅವರ ಆರೋಪವನ್ನು ತಳ್ಳಿ ಹಾಕಿದ ಅವರು, ಹೇಮಾವತಿ ನೀರು ಬಿಡುಗಡೆ ಕುರಿತ ನಿರ್ಧಾರವನ್ನು ವೈಯಕ್ತಿಕವಾಗಿ ತೆಗೆದುಕೊಳ್ಳುವುದಿಲ್ಲ. ರಾಜ್ಯ ಮಟ್ಟದಲ್ಲಿ ಜಲಸಂಪನ್ಮೂಲ ಸಚಿವರ ನೇತೃತ್ವದ ವ್ಯವಸ್ಥೆ ಇರುವುದರಿಂದ ನಿರ್ದೇಶನದಂತೆ ನೀರು ಬಿಡುಗಡೆ



ಮಾಡಲಾಗುತ್ತದೆ ಎಂದು ಸ್ಪಷ್ಟಪಡಿಸಿದರು. ನೀರಿನ ಹಂಚಿಕೆ ಕುರಿತು ಸಭೆ ಕರೆದಾಗ ಎ.ಮಂಜು ಭಾಗವಹಿಸಿದ್ದರು. ಯಾವುದೇ ಅಸಮಾಧಾನ ಅಥವಾ ಆಕ್ಷೇಪಣೆ ಇದ್ದರೆ ಸಭೆಯಲ್ಲಿಯೇ ಚರ್ಚಿಸಬೇಕಿತ್ತು. ಸಭೆಯಲ್ಲಿ ಮೌನವಾಗಿದ್ದು ಹೊರಗೆ ಬಂದು ತಪ್ಪು ಸಂದೇಶ ನೀಡುವುದು ಸರಿಯಲ್ಲ ಎಂದು ತಿರುಗೇಟು ನೀಡಿದರು.

ತಮಿಳುನಾಡಿಗೆ ನಿಗದಿತ ಪ್ರಮಾಣದ ನೀರು ಹರಿಸಬೇಕಾದ ಕಾನೂನುಬದ್ಧ ಬದ್ಧತೆಯಿದ್ದು, ಹಾಸನ ಹಾಗೂ ತುಮಕೂರು ಜಿಲ್ಲೆಗಳ ಕೆರೆ-ಕಟ್ಟೆಗಳನ್ನು ತುಂಬಿಸುವ ಅಗತ್ಯವೂ ಇದೆ. ನೀರು ಬಿಡುಗಡೆ ಮಾಡಿದ ನಂತರ ಅದರ ಸ್ವಾಭಾವಿಕ ಹರಿವನ್ನು ನಿರ್ದಿಷ್ಟ ಸ್ಥಳದಲ್ಲಿ ತಡೆಯಲು ಸಾಧ್ಯವಿಲ್ಲ ಎಂದರು.

ನೀರಿನ ಹಂಚಿಕೆಗೆ ಸಂಬಂಧಿಸಿದ ಅಂಕಿ-ಅಂಶಗಳನ್ನು ವಿವರಿಸಲು ತಾವು ಸಿದ್ಧರಾಗಿದ್ದು, ಈ ವಿಷಯದ ಕುರಿತು ವಿಧಾನಸಭೆಯಲ್ಲಿಯೂ ಸುದೀರ್ಘವಾಗಿ ಮಾತನಾಡಿದ್ದೇನೆ



> ಜನರ ಪರವಾಗಿ ಕೆಲಸ ಮಾಡುವ ಪ್ರಯತ್ನ ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ. ಜನರು ನನ್ನ ಮೇಲೆ ವಿಶ್ವಾಸವಿಟ್ಟು ಮತ ನೀಡಿದ್ದಾರೆ. ಆ ವಿಶ್ವಾಸಕ್ಕೆ ತಕ್ಕಂತೆ ಕೆಲಸ ಮಾಡುವುದು ನನ್ನ ಜವಾಬ್ದಾರಿ. ಜನರ ಸಮಸ್ಯೆಗಳನ್ನು ಕೇಳುವುದು, ಅಧಿಕಾರಿಗಳ ಗಮನಕ್ಕೆ ತರುವುದು ಮತ್ತು ಪರಿಹಾರಕ್ಕೆ ಪ್ರಯತ್ನಿಸುವುದು ನನ್ನ ಕರ್ತವ್ಯ.
>
> **- ಶ್ರೇಯಸ್ ಪಟೇಲ್, ಸಂಸದ**

ಎಂದು ಹೇಳಿದರು.

ರಾಜಕೀಯ ಲಾಭಕ್ಕಾಗಿ ವೈಯಕ್ತಿಕ ಆರೋಪ ಮಾಡಬಾರದು. ಎ.ಮಂಜು ಅವರು ಹಿರಿಯ ಶಾಸಕರಾಗಿದ್ದು, ಮಾಜಿ ಸಚಿವರೂ ಆಗಿರುವ ಕಾರಣ ಹೆಚ್ಚು ಜವಾಬ್ದಾರಿಯಿಂದ ಮಾತನಾಡಬೇಕು. ಅವರ ಬಗ್ಗೆ ಗೌರವವಿದ್ದರೂ, ಹಾಸನ ಜಿಲ್ಲೆಯ ಜನರಿಗೆ ನೀರಿನ ವಿಚಾರದಲ್ಲಿ ಅನ್ಯಾಯ ಮಾಡಲಾಗಿದೆ ಎಂಬ ಆರೋಪ ಸಂಪೂರ್ಣ ಸುಳ್ಳು ಎಂದು ಶಿವಲಿಂಗೇಗೌಡ ಹೇಳಿದರು.

ನಮ್ಮ ಜಿಲ್ಲೆಯ ಜನರ ಹಿತ ಕಾಪಾಡುವುದು ನನಗೆ ಗೊತ್ತಿದೆ. ನೀರಾವರಿ ವಿಚಾರದಲ್ಲಿ ಸುಳ್ಳು ಹೇಳುವುದಿಲ್ಲ. ಜಿಲ್ಲೆಯ ರೈತರ ಹಿತದೃಷ್ಟಿಯಿಂದಲೇ ಕೆಲಸ ಮಾಡುತ್ತೇನೆ

### ಜನರ ಋಣ ತೀರಿಸುವ ಕೆಲಸ ಮಾಡುವೆ

ನಾನು ದಿಶಾ ಸಮಿತಿಯ ಅಧ್ಯಕ್ಷನಾಗಿದ್ದು, ಅಭಿವೃದ್ಧಿ ಯೋಜನೆಗಳ ಅನುಷ್ಠಾನ ಹಾಗೂ ಸಾರ್ವಜನಿಕರ ಸಮಸ್ಯೆಗಳ ಕುರಿತು ಗಮನ ಹರಿಸುವ ಜವಾಬ್ದಾರಿ ತಮ್ಮ ಮೇಲಿದೆ ಎಂದು ಸಂಸದ ಶ್ರೇಯಸ್ ಪಟೇಲ್ ಹೇಳಿದರು.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸಭೆ ನಡೆಸುವ ಕುರಿತು ದಿಶಾ ಸಮಿತಿಯಲ್ಲಿಯೇ ತೀರ್ಮಾನ ಕೈಗೊಳ್ಳಲಾಗಿದೆ. ಹೀಗಾಗಿ ಈ ವಿಚಾರದಲ್ಲಿ ಯಾವುದೇ ರೀತಿಯ ಅಧಿಕಾರ ಮೀರಿದ ಕ್ರಮ ಕೈಗೊಂಡಿಲ್ಲ. ನನಗೆ ಏಳು ಲಕ್ಷ ಜನರು ಮತ ನೀಡಿದ್ದಾರೆ. ಜನರ ಬಳಿಗೆ ಹೋಗದೆ ಕೇವಲ ಕಚೇರಿ ಅಥವಾ ನಾಲ್ಕು ಗೋಡೆಗಳ ಮಧ್ಯೆ ಕುಳಿತುಕೊಳ್ಳುವುದು ನನ್ನ ಕರ್ತವ್ಯವೇ? ಜನರು ನನ್ನನ್ನು ಆಯ್ಕೆ ಮಾಡಿರುವುದು ಅವರ ಸಮಸ್ಯೆಗಳಿಗೆ ಧ್ವನಿಯಾಗಲೆಂದು. ಹೀಗಿರುವಾಗ ಕ್ಷೇತ್ರದ ಜನರ ಬಳಿಗೆ ತೆರಳಿ ಅವರ ಸಂಕಷ್ಟಗಳನ್ನು ಆಲಿಸುವುದನ್ನು ಯಾರೂ ತಪ್ಪು ಎಂದು ಹೇಳಲು ಸಾಧ್ಯವಿಲ್ಲ ಎಂದು ಹೇಳಿದರು. ಸಭೆಯ ಸಂದರ್ಭದಲ್ಲಿ ಶಾಸಕ ಎ.ಮಂಜು ಅವರ ವಿರುದ್ಧ ಯಾವುದೇ ಅವಹೇಳನಕಾರಿ ಅಥವಾ ತುಚ್ಛ ಮಾತುಗಳನ್ನು ಆಡಿಲ್ಲ ಎಂದರು.

ಎಂದು ಅವರು ಭರವಸೆ ನೀಡಿದರು.

#### ಜನರ ಬಳಿಗೆ ಹೋಗುವುದು ತಪ್ಪಾ?

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಜನರ ಸಮಸ್ಯೆಗಳನ್ನು ಆಲಿಸಲು ಅವರ ಬಳಿಗೆ ತೆರಳುವುದೇ ತಪ್ಪೇ? ಏಳು ಲಕ್ಷ ಜನರು ಮತ ನೀಡಿ ಲೋಕಸಭೆಗೆ ಕಳುಹಿಸಿರುವಾಗ ನಾನು ನಾಲ್ಕು ಗೋಡೆಗಳ ಮಧ್ಯೆ ಕುಳಿತುಕೊಳ್ಳಬೇಕೇ ಎಂದು ಸಂಸದ ಶ್ರೇಯಸ್ ಎಂ. ಪಟೇಲ್ ಪ್ರಶ್ನಿಸಿದರು.

ಹಳ್ಳಿಮೈಸೂರಿನಲ್ಲಿ ಇತ್ತೀಚೆಗೆ ನಡೆಸಿದ ಸಭೆಗೆ ಆಕ್ಷೇಪ ವ್ಯಕ್ತಪಡಿಸಿರುವ ಅರಕಲಗೂಡು ಶಾಸಕ ಎ.ಮಂಜು ಅವರಿಗೆ ತಿರುಗೇಟು ನೀಡಿದ ಅವರು, ಹಳ್ಳಿಮೈಸೂರು ತಮ್ಮ ಸ್ವಂತ ಹೋಬಳಿ ಹಾಗೂ ಕರ್ಮಭೂಮಿಯಾಗಿದ್ದು, ಅಲ್ಲಿನ ಜನರ ಸಮಸ್ಯೆಗಳನ್ನು ನೇರವಾಗಿ ಆಲಿಸುವ ಉದ್ದೇಶದಿಂದ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿದ್ದಾಗಿ ಹೇಳಿದರು. ಹಿಂದುಳಿದ ಹೋಬಳಿಯ ಜನರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಮಾಹಿತಿ ಪಡೆಯಲು ತಹಸೀಲ್ದಾರ್ ಹಾಗೂ ಕಾರ್ಯನಿರ್ವಹಣಾಧಿಕಾರಿಯನ್ನು ಸ್ಥಳಕ್ಕೆ ಕರೆಸಲಾಗಿತ್ತು. ಈ ವೇಳೆ ಸಾವಿರಾರು ಜನರು ತಮ್ಮ ಅಹವಾಲುಗಳು ಹಾಗೂ ಮನವಿ ಪತ್ರಗಳೊಂದಿಗೆ ಆಗಮಿಸಿದ್ದರು. ಜನರು ಸಮಸ್ಯೆ ಹೇಳಿಕೊಂಡು ಬಂದಾಗ ಅವರ ಮಾತು ಆಲಿಸುವುದು ಜನಪ್ರತಿನಿಧಿಯಾಗಿ ತಮ್ಮ ಕರ್ತವ್ಯ ಎಂದು ಅವರು ಸ್ಪಷ್ಟಪಡಿಸಿದರು.

ತಾವು ಸಭೆ ನಡೆಸುವ ಮೂಲಕ ಶಾಸಕರ ಹಕ್ಕುಚ್ಯುತಿ ಮಾಡಿದ್ದೇನೆ ಎಂದು ಎ.ಮಂಜು ಅವರು ಪತ್ರ ಬರೆದಿರುವ ವಿಚಾರವನ್ನು ಪ್ರಸ್ತಾಪಿಸಿದ ಶ್ರೇಯಸ್ ಪಟೇಲ್, ಜನರ ಸಮಸ್ಯೆ ಆಲಿಸುವುದರಲ್ಲಿ ಹಕ್ಕುಚ್ಯುತಿ ಎಲ್ಲಿ ಬರುತ್ತದೆ? ನಾನು ಜನರ ಪರವಾಗಿ ಕೆಲಸ ಮಾಡಬಾರದಾ? ಅವರ ಧ್ವನಿಯಾಗಬಾರದಾ ಎಂದು ಪ್ರಶ್ನಿಸಿದರು.

## ಅನಾರೋಗ್ಯ : ಯೋಧ ಸೇರಿ ಮೂವರ ಸಾವು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ದಿಢೀರ್ ಹೃದಯಾಘಾತದಿಂದ ಇಬ್ಬರು ಅಧಿಕಾರಿಗಳು ಹಾಗು ಅನಾರೋಗ್ಯದಿಂದ ಕರ್ತವ್ಯ ನಿರತ ಯೋಧ ಮೃತಪಟ್ಟಿದ್ದಾರೆ.

ಆಲೂರು ತಾಲ್ಲೂಕಿನ ಹಾಂಜಿಹಳ್ಳಿ ಗ್ರಾಮದ ಹೆಚ್.ಹೆಚ್.ಮಧು (34) ಅವರು ಅಸ್ಸಾಂನಲ್ಲಿ ಗಡಿ ಭದ್ರತಾ ಪಡೆ (ಬಿಎಸ್‌ಎಫ್)ಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ವೇಳೆ ದಿಢೀರ್ ಅನಾರೋಗ್ಯದಿಂದ ಮೃತಪಟ್ಟಿದ್ದಾರೆ. ಕಳೆದ 15 ವರ್ಷಗಳಿಂದ ಬಿಎಸ್ ಎಫ್‌ನಲ್ಲಿ ಸೇವೆ ಸಲ್ಲಿಸುತ್ತಿದ್ದ ಅವರಿಗೆ ನಿವೃತ್ತಿಗೆ ಇನ್ನು ಕೇವಲ ಮೂರು ತಿಂಗಳು ಬಾಕಿ ಇತ್ತು. ಒಂದೂವರೆ ತಿಂಗಳ ಹಿಂದಷ್ಟೇ ಅವರ ಪತ್ನಿಗೆ ಮಗು ಜನಿಸಿತ್ತು. ಸಾವಿಗೂ ಮುನ್ನ ಕುಟುಂಬಸ್ಥರೊಂದಿಗೆ ದೂರವಾಣಿಯಲ್ಲಿ ಮಾತನಾಡಿದ್ದ ಮಧು ಅವರು ಬಳಿಕ ಅನಾರೋಗ್ಯಕ್ಕೆ ತುತ್ತಾಗಿ ಮೃತಪಟ್ಟಿದ್ದಾರೆ. ಸಕಲ ಸರ್ಕಾರಿ ಗೌರವಗಳೊಂದಿಗೆ ಹಾಂಜಿಹಳ್ಳಿ ಗ್ರಾಮದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ.

ಸಕಲೇಶಪುರದಲ್ಲಿ ಪಶುಸಂಗೋಪನೆ ಇಲಾಖೆ ಸಹಾಯಕ ನಿರ್ದೇಶಕ ಡಾ. ವೆಂಕಟೇಶ್ (55) ಹೃದಯಾಘಾತದಿಂದ ಮೃತಪಟ್ಟಿದ್ದಾರೆ. ಮೂಲತಃ ಚಿಕ್ಕಬಳ್ಳಾಪುರ ಜಿಲ್ಲೆಯವರಾದ ಅವರು ಕಳೆದ ಐದಾರು ವರ್ಷಗಳಿಂದ ಸಕಲೇಶಪುರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರು. ಕುಟುಂಬ ಬೆಂಗಳೂರಿನಲ್ಲಿ ನೆಲೆಸಿದ್ದು, ಸಕಲೇಶಪುರದಲ್ಲಿ ಒಬ್ಬರೇ ವಾಸವಿದ್ದರು. ಗುರುವಾರ ಕೆಲಸ ಮುಗಿಸಿ ಮನೆಗೆ ತೆರಳಿದ್ದ ಅವರು, ಶುಕ್ರವಾರ ಬೆಳಿಗ್ಗೆ ಮನೆಯಲ್ಲೇ ಮೃತಪಟ್ಟಿರುವುದು ಬೆಳಕಿಗೆ ಬಂದಿದೆ. ಫೋನ್ ಕರೆ ಸ್ವೀಕರಿಸದ ಹಿನ್ನೆಲೆಯಲ್ಲಿ ಸಿಬ್ಬಂದಿ ಮನೆಗೆ ತೆರಳಿ ಪರಿಶೀಲಿಸಿದಾಗ ಘಟನೆ ತಿಳಿದುಬಂದಿದೆ.

#### ಬಿಇಒ ಕಚೇರಿ ಅಧೀಕ್ಷಕ ಸಾವು

ನಗರದ ಸದಾಶಿವ ನಗರದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಅಧೀಕ್ಷಕ ವೇಣುಗೋಪಾಲ್ (45) ಕೂಡ ಹೃದಯಾಘಾತದಿಂದ ಮೃತಪಟ್ಟಿದ್ದಾರೆ. ಮುಂಜಾನೆ 5 ಗಂಟೆ ಸುಮಾರಿಗೆ ಮನೆಯಲ್ಲಿ ಮಲಗಿದ್ದ ವೇಳೆ ಹೃದಯಾಘಾತ ಸಂಭವಿಸಿದೆ ಎನ್ನಲಾಗಿದೆ. ಅವರು ರಾಜ್ಯ ಸರ್ಕಾರಿ ಎನ್ ಪಿಎಸ್ ನೌಕರರ ಸಂಘದ ಹಾಸನ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿಯೂ ಸೇವೆ ಸಲ್ಲಿಸುತ್ತಿದ್ದರು. ಬಿಟ್ಟಗೌಡನಹಳ್ಳಿ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

## ವಿವಿಧ ಬೇಡಿಕೆ ಈಡೇರಿಕೆಗೆ ಬ್ಯಾಂಕ್ ನೌಕರರ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಮಾನ ಪ್ರೋತ್ಸಾಹ ಧನ ನೀತಿ, ವಾರದಲ್ಲಿ ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಜಾರಿ ಸೇರಿದಂತೆ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಬ್ಯಾಂಕ್ ಸಂಘಟನೆಗಳ ಸಂಯುಕ್ತ ವೇದಿಕೆಯಿಂದ ಶುಕ್ರವಾರ ಎನ್.ಆರ್. ವೃತ್ತದ ಎಸ್‌ಬಿಐ ಬ್ಯಾಂಕ್ ಎದುರು ಪ್ರತಿಭಟನೆ ನಡೆಸಲಾಯಿತು.

ವೇದಿಕೆ ಹಾಸನ ಘಟಕದ ಸಂಚಾಲಕ ಆರ್.ಕುಮಾರ್ ಮಾತನಾಡಿ, ವಾರದಲ್ಲಿ ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಜಾರಿ ಮಾಡುವಂತೆ ಹಲವು ವರ್ಷಗಳಿಂದ ಆಗ್ರಹಿಸಲಾಗುತ್ತಿದೆ. ಇಂಡಿಯನ್ ಬ್ಯಾಂಕ್ ಅಸೋಸಿಯೇಷನ್ ಮತ್ತು ಬ್ಯಾಂಕ್ ನೌಕರರ ಸಂಘಟನೆಗಳ ನಡುವೆ ಚರ್ಚೆಯಾಗಿ 2024ರ ಮಾರ್ಚ್‌ನಲ್ಲೇ ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ಆದರೆ ಕಾನೂನು ಜಾರಿಯಾಗಿಲ್ಲ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳದೆ ವಿಳಂಬ ಧೋರಣೆ ಅನುಸರಿಸುತ್ತಿದೆ




ಎಂದು ಆರೋಪಿಸಿದರು.

ಬ್ಯಾಂಕ್ ನೌಕರರು ಸಾರ್ವಜನಿಕರಿಗೆ ಅಗತ್ಯವಾದ ಬ್ಯಾಂಕಿಂಗ್ ಸೇವೆಗಳನ್ನು ನಿರಂತರವಾಗಿ ಒದಗಿಸುತ್ತಿದ್ದು, ಕೆಲಸದ ಒತ್ತಡ ಹೆಚ್ಚುತ್ತಿರುವ ಹಿನ್ನಲೆಯಲ್ಲಿ ನೌಕರರ ಕೆಲಸ, ಜೀವನ ಸಮತೋಲನಕ್ಕೂ ಆದ್ಯತೆ ನೀಡಬೇಕಿದೆ. ವಾರದಲ್ಲಿ ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಜಾರಿಯಾದರೆ ನೌಕರರಿಗೆ ಹೆಚ್ಚಿನ ವಿಶ್ರಾಂತಿ ದೊರೆಯುವುದರ ಜೊತೆಗೆ ಸೇವಾ ದಿನಗಳಲ್ಲಿ ಕೆಲಸದ ಸಾಮರ್ಥ್ಯ ಮತ್ತು ಕಾರ್ಯಕ್ಷಮತೆ ಹೆಚ್ಚಲು ಸಹಕಾರಿಯಾಗಲಿದೆ. ಬ್ಯಾಂಕಿಂಗ್ ಕ್ಷೇತ್ರದ ಬದಲಾಗುತ್ತಿರುವ ಕಾರ್ಯವೈಖರಿ ಹಾಗೂ ಡಿಜಿಟಲ್ ಬ್ಯಾಂಕಿಂಗ್ ವ್ಯವಸ್ಥೆಯ ಬೆಳವಣಿಗೆಯನ್ನು ಗಮನದಲ್ಲಿಟ್ಟುಕೊಂಡು ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆಯನ್ನು ಜಾರಿಗೊಳಿಸುವುದು ಅಗತ್ಯವಾಗಿದೆ ಎಂದರು.

ನೌಕರರಿಗೆ ಸಮಾನ ಹಾಗೂ ನ್ಯಾಯಸಮ್ಮತ ಪ್ರೋತ್ಸಾಹ ಧನ ನೀತಿ ಜಾರಿಗೊಳಿಸಬೇಕು. ಅಗತ್ಯ ಪ್ರಮಾಣದಲ್ಲಿ ಕ್ಲರಿಕಲ್ ಹಾಗು ಸಬ್ ಸ್ಟಾಫ್ ನೇಮಕಾತಿ, ಎನ್‌ಪಿಎಸ್ ರದ್ದು, ಗ್ರಾಚ್ಯುಟಿ ಮಿತಿ ಹೆಚ್ಚಳ, ಪಿಂಚಣಿ ಪರಿಷ್ಕರಣೆ, ಏಕರೂಪದ ತುಟ್ಟಿ ಭತ್ಯೆ, ನಿವೃತ್ತ ನೌಕರರ ವೈದ್ಯಕೀಯ ವಿಮೆ ಸೇರಿ ಹಲವು ಬಾಕಿ ಬೇಡಿಕೆಗಳನ್ನೂ ಶೀಘ್ರ ಪರಿಹರಿಸಬೇಕೆಂದು ಒತ್ತಾಯಿಸಿದರು.

ಮೂಲಭೂತ ಹಕ್ಕುಗಳ ಈಡೇರಿಕೆಗಾಗಿ ಸೆ. 28 ರಿಂದ 30ರ ವರೆಗೆ ಅಖಿಲ ಭಾರತ ಬ್ಯಾಂಕ್ ಮುಷ್ಕರ ಮತ್ತು ಅ. 26ರಿಂದ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಲಾಗುವುದು ಎಂದರು.

ಪ್ರತಿಭಟನೆಯಲ್ಲಿ ಸಂಘದ ಜಿ.ಟಿ.ಲೋಕೇಶ್, ಜಾವೀದ್, ಅಶೋಕ್ ಭಟ್, ಚೇತನ್ ಕುಮಾರ್, ಜಯಚಂದ್ರ, ಚಂದ್ರಶೇಖರ್ ಇತರರು ಉಪಸ್ಥಿತರಿದ್ದರು.

## ಶುಂಠಿ ವ್ಯಾಪಾರಕ್ಕೆ ಪರ್ಯಾಯ ಕ್ರಮಕ್ಕೆ ಮನವಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶುಂಠಿ ವ್ಯಾಪಾರಿ ಕಟ್ಟೆಗಳನ್ನು ತೆರವುಗೊಳಿಸುವ ಮೊದಲು ಎಪಿಎಂಸಿಯಲ್ಲಿ ವ್ಯಾಪಾರಿಗಳಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂದು ಎಪಿಎಂಸಿ ಜಿಂಜರ್ ಅಸೋಸಿಯೇಷನ್‌ನಿಂದ ಎಪಿಎಂಸಿ ಅಧಿಕಾರಿಗಳಿಗೆ ಶುಕ್ರವಾರ ಮನವಿ ಸಲ್ಲಿಸಲಾಯಿತು.

ಹಲವು ವರ್ಷಗಳಿಂದ ಶುಂಠಿ ವ್ಯಾಪಾರವನ್ನು ಅವಲಂಬಿಸಿಕೊಂಡು ಅನೇಕ ವ್ಯಾಪಾರಸ್ಥರು ತಮ್ಮ ಜೀವನೋಪಾಯ ಕಂಡುಕೊಂಡಿದ್ದಾರೆ. ಶುಂಠಿ ವ್ಯಾಪಾರಕ್ಕೆ ಸಂಬಂಧಿಸಿ ಎಪಿಎಂಸಿ ಆವರಣದಲ್ಲಿ ಇರುವ ಕಟ್ಟೆಗಳು ಹಾಗೂ ವ್ಯಾಪಾರ ಸ್ಥಳಗಳು ಪ್ರಮುಖವಾಗಿವೆ. ಅಭಿವೃದ್ಧಿ, ಸ್ವಚ್ಛತೆ ಹಾಗೂ ಮೂಲಸೌಕರ್ಯ ಸುಧಾರಣೆಯ ಹೆಸರಿನಲ್ಲಿ ಕಟ್ಟೆಗಳನ್ನು ತೆರವುಗೊಳಿಸಲಾಗುತ್ತಿದೆ. ಆದರೆ ವ್ಯಾಪಾರಕ್ಕೆ ಪರ್ಯಾಯ ಕ್ರಮ ಕೈಗೊಂಡಿಲ್ಲ. ಕಟ್ಟೆಗಳನ್ನು ತೆರವುಗೊಳಿಸುವ ಮೊದಲು ಪ್ರತಿ ವ್ಯಾಪಾರಸ್ಥರ ವ್ಯಾಪಾರ ಹಾಗೂ ಜೀವನೋಪಾಯದ ಹಿತದೃಷ್ಟಿಯಿಂದ ಕ್ರಮ ಜರುಗಿಸಬೇಕೆಂದು ಕೋರಿದರು.

ವ್ಯಾಪಾರಿಗಳಿಗೆ ಅಂಗಡಿ ಹಂಚಿಕೆ ಪ್ರಕ್ರಿಯೆಯಲ್ಲಿ ಹಲವು ವರ್ಷಗಳಿಂದ ಎಪಿಎಂಸಿಯಲ್ಲಿ ವ್ಯಾಪಾರ ನಡೆಸುತ್ತಿರುವ ಹಾಲಿ ವ್ಯಾಪಾರಿಗಳಿಗೆ ಆದ್ಯತೆ ನೀಡಬೇಕು. ಅಂಗಡಿ ಹಂಚಿಕೆ, ಬಾಡಿಗೆ, ಸ್ಥಳ ಹಾಗೂ ಇತರ ವಿಚಾರಗಳ ಬಗ್ಗೆ ಸಂಘದೊಂದಿಗೆ ಚರ್ಚಿಸಿ ಪಾರದರ್ಶಕತೆ ಕಾಪಾಡಬೇಕು. ಅಗತ್ಯವಿರುವ ಲೋಡಿಂಗ್-ಅನ್ ಲೋಡಿಂಗ್, ವಾಹನ ನಿಲುಗಡೆ, ಸರಕು ಸಂಗ್ರಹಣೆ ಹಾಗೂ ವ್ಯಾಪಾರಕ್ಕೆ ಅನುಕೂಲವಾಗುವ ಮೂಲಸೌಕರ್ಯ ಕಲ್ಪಿಸಬೇಕು. ಅಭಿವೃದ್ಧಿ ಕಾಮಗಾರಿಗಳಿಂದ ವ್ಯಾಪಾರಕ್ಕೆ ಅಡ್ಡಿಯಾಗದಂತೆ ಕ್ರಮ ವಹಿಸಬೇಕು ಎಂದು ಮನವಿ ಮಾಡಿದರು.

ಎಪಿಎಂಸಿ ಜಿಂಜರ್ ಅಸೋಸಿಯೇಷನ್ ಅಧ್ಯಕ್ಷ ಫೈಜ್ ಅರಷು, ಉಪಾಧ್ಯಕ್ಷ ಜಮೀಲ್ ಬೇಗ್, ಕಾರ್ಯದರ್ಶಿ ಇರ್ಫಾನ್ ಕೊಡ್ಲಿಪೇಟೆ, ಸದಸ್ಯರಾದ ಫೈರೋಜ್ ಪಾಷ, ಶಮೀಲ್, ಸಜ್ಜದ್, ಎಸ್.ಎ.ಸಾದಿಕ್, ಯೋಗೇಶ್, ನಹೀಮ್, ನವೀನ್ ಮುಸವಿರ್, ಜಾಕಿರ್, ಖಮರ್, ಅಲೀಮ್, ಇಲ್ಯಾಜ್ ರೂಮನ್ ಇತರರಿದ್ದರು.

## ಶಾಂತಿಯುತ ಗಣೇಶೋತ್ಸವಕ್ಕೆ ಎಸ್‌ಪಿ ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಗಣೇಶ ಉತ್ಸವದ ವೇಳೆ ಡಿ.ಜೆ. ಬಳಕೆಯಲ್ಲಿ ನಿಯಮ ಉಲ್ಲಂಘಿಸಬಾರದು. ಶಾಂತಿಯುತ ಆಚರಣೆ ಮೂಲಕ ಕಾನೂನು ಪಾಲಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ವಸತಿ ಪ್ರದೇಶಗಳಲ್ಲಿ 65 ಹಾಗೂ ವಸತಿ ರಹಿತ ಪ್ರದೇಶಗಳಲ್ಲಿ 75 ಡೆಸಿಬಲ್ ವರೆಗೆ ಡಿ.ಜೆ. ಹಾಕಬಹುದು. ಮೆರವಣಿಗೆ ನೆಪದಲ್ಲಿ ವಿನಾಕಾರಣ ಸಾರ್ವಜನಿಕರಿಗೆ ತೊಂದರೆ ನೀಡುವುದು ಕಂಡುಬಂದರೆ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸೆ. 14 ರಿಂದ ಗಣೇಶ ಉತ್ಸವ ಪ್ರಾರಂಭವಾಗಲಿದೆ. ಜಿಲ್ಲಾದ್ಯಂತ ಕಳೆದ ವರ್ಷ 2542 ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪಿಸಲಾಗಿತ್ತು.



ಅವಘಡ ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ. ಪೊಲೀಸ್ ಠಾಣಾ ಮಟ್ಟದಲ್ಲಿ ಶಾಂತಿಸಭೆ ನಡೆಸಲಾಗಿದೆ ಎಂದರು.

ಈಗಾಗಲೇ ಗಣೇಶ ಉತ್ಸವ ಸಮಿತಿಯವರೊಂದಿಗೆ ಚರ್ಚೆ ನಡೆಸಲಾಗಿದೆ. ಜಿಲ್ಲಾಡಳಿತದೊಂದಿಗೆ ಸಭೆ ನಡೆಸಿ ಏಕಗವಾಕ್ಷಿ ವ್ಯವಸ್ಥೆ ಜಾರಿಗೊಳಿಸಲಾಗಿದೆ. ತಾಲ್ಲೂಕು ಕಚೇರಿ ಮೂಲಕ ಗಣೇಶ ಪ್ರತಿಷ್ಠಾಪನೆಗೆ ಅನುಮತಿ ನೀಡಲಾಗುತ್ತದೆ. ಗಣೇಶ ಮೂರ್ತಿ ಕೂರಿಸಲು ಜಾಗದ ಮಾಲೀಕರ, ಸೆಸ್ಕ್, ಪರಿಸರ ಮಾಲಿನ್ಯ ಮತ್ತು ನಿಯಂತ್ರಣ ಮಂಡಳಿ, ಅಗ್ನಿಶಾಮಕ ಠಾಣೆ, ಗಣಪತಿಯ ಮೂರ್ತಿ ಎತ್ತರ 15 ಅಡಿಗಿಂತ ಹೆಚ್ಚಿದ್ದರೆ ಲೋಕೋಪಯೋಗಿ ಇಲಾಖೆಯ ಅನುಮತಿ ಪಡೆಯಬೇಕು. ಪೆಂಡಾಲ್‌ನಲ್ಲಿ ಪ್ರಥಮ ಚಿಕಿತ್ಸಾ ವ್ಯವಸ್ಥೆ ಮಾಡಿಕೊಳ್ಳಬೇಕು. ಏಕಗವಾಕ್ಷಿ ವ್ಯವಸ್ಥೆಯಡಿ ಈ ಎಲ್ಲಾ ಮುನ್ನೆಚ್ಚರಿಕೆ ಕೈಗೊಳ್ಳಬೇಕಾಗುತ್ತದೆ ಎಂದರು.

ಅಗ್ನಿ ಅನಾಹುತ ಸಂಭವಿಸಿದರೆ ಅದನ್ನು ತಡೆಯಲು ನೀರಿನ ವ್ಯವಸ್ಥೆ, ಸಹಾಯವಾಣಿ ನಂಬರ್‌ಗಳನ್ನು ಪ್ರದರ್ಶಿಸಬೇಕು ಎಂದು ಹೇಳಿದರು.

ಅದ್ದೂರಿ ಮೆರವಣಿಗೆಗೆ ಭದ್ರತೆ ಕಲ್ಪಿಸಬೇಕಿರುವುದರಿಂದ ಮೂರು ದಿನ ಮೊದಲೇ ಪೊಲೀಸರಿಗೆ ಮಾಹಿತಿ ನೀಡಬೇಕು. ಪೆಂಡಾಲ್‌ಗಳಲ್ಲಿ ಪ್ರತಿ ದಿನ ಇಬ್ಬರು ರಾತ್ರಿ ವಾಸ್ತವ್ಯ ಮಾಡಬೇಕು. ಸ್ಥಳೀಯ ಪೊಲೀಸರೊಂದಿಗೆ ಸಂಪರ್ಕದಲ್ಲಿರುವುದು ಹಾಗೂ ಸಿಸಿಟಿವಿ ಕ್ಯಾಮರಾ ಅಳವಡಿಸಬೇಕು. ಸಾವಿರಕ್ಕಿಂತ ಅಧಿಕ ಜನರು ಪಾಲ್ಗೊಳ್ಳುವುದಿದ್ದರೆ ಅಂತಹ ಸಮಿತಿಯವರು ಸ್ವಯಂ ಸೇವಕರ ನಿಯೋಜಿಸಬೇಕು.

5 ಸಾವಿರಕ್ಕಿಂತ ಅಧಿಕ ಮಂದಿ ಪಾಲ್ಗೊಳ್ಳುವ ಮೆರವಣಿಗೆ ಇದ್ದರೆ 200 ಸ್ವಯಂ ಸೇವಕರನ್ನು ನಿಯೋಜಿಸುವುದರ ಜೊತೆಗೆ ಅವರ ಮೊಬೈಲ್ ನಂಬರ್, ಫೋಟೊ ಪೊಲೀಸ್ ಠಾಣೆಗೆ ನೀಡಬೇಕು. ಜೊತೆಗೆ ಅವರಿಗೆ ಗುರುತಿನ ಚೀಟಿ ನೀಡಬೇಕೆಂದು ಸೂಚಿಸಿದರು.

ಶಾಂತಿಯುತ ಹಬ್ಬ ಆಚರಣೆಗೆ ಎಲ್ಲರೂ ಸಹಕರಿಸಬೇಕು. ನಮ್ಮ ಇಲಾಖೆಯಿಂದ ಎಲ್ಲಾ ಕ್ರಮ ಕೈಗೊಳ್ಳಲಾಗಿದೆ. ಏನೇ ಸಮಸ್ಯೆಗಳಿದ್ದರೂ ತಕ್ಷಣವೇ ಪೊಲೀಸರನ್ನು ಸಂಪರ್ಕಿಸಬೇಕು ಎಂದರು.

# ಬೇಲೂರು ತಾಲ್ಲೂಕು ಬರಪೀಡಿತ ಪಟ್ಟಿಗೆ ಸೇರಿಸಿ: ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಬೇಲೂರು: ಮಳೆ ಕೊರತೆಯಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ನೆರವಾಗಲು ಕೂಡಲೇ ಬೇಲೂರು ತಾಲ್ಲೂಕನ್ನು ಬರ ಪೀಡಿತ ಪ್ರದೇಶವೆಂದು ಘೋಷಿಸಬೇಕು ಎಂದು ಆಗ್ರಹಿಸಿ ರೈತ ಸಂಘದಿಂದ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ಬಸವೇಶ್ವರ ವೃತ್ತದಲ್ಲಿ ರಸ್ತೆ ತಡೆ ನಡೆಸಿದ ಪ್ರತಿಭಟನಾಕಾರರು ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ರೈತ ಸಂಘದ ತಾಲ್ಲೂಕು ಅಧ್ಯಕ್ಷ ಭೋಗಮಲ್ಲೇಶ್ ಮಾತನಾಡಿ, ಮುಂದಿನ ಏಳು ದಿನಗಳಲ್ಲಿ ಬರಪೀಡಿತ ತಾಲ್ಲೂಕು ಎಂದು ಘೋಷಿಸಿ ರೈತರಿಗೆ ಬೆಳೆ ಪರಿಹಾರ ನೀಡಬೇಕು. ಇಲ್ಲವಾದರೆ ರೈತ ಸಂಘ, ಕಾಫಿ ಬೆಳೆಗಾರರ ಸಂಘ ಹಾಗು ವಿವಿಧ ಕನ್ನಡಪರ ಸಂಘಟನೆಗಳ ನೇತೃತ್ವದಲ್ಲಿ ಬೇಲೂರು ಬಂದ್ ಗೆ ಕರೆ ನೀಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ರಾಜ್ಯದ ಹಲವು ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ. ಆದರೆ ಬೇಲೂರನ್ನು ಕಡೆಗಣಿಸಲಾಗಿದೆ. ಜೋಳ ಸೇರಿ ಹಲವು ಬೆಳೆಗಳು ಒಣಗಿ ನಾಶವಾಗಿದ್ದು, ಗದ್ದೆಗಳಲ್ಲಿ ಬೆಳೆ ಬೆಳೆಯಲಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಮಲೆನಾಡು ಭಾಗದಲ್ಲಿ ಕಾಫಿ ಉದುರುತ್ತಿದ್ದು, ಮೆಣಸು ಸೇರಿ ವಿವಿಧ ಬೆಳೆಗಳು ಒಣಗುತ್ತಿವೆ. ಇಂತಹ ಗಂಭೀರ ಪರಿಸ್ಥಿತಿಯಲ್ಲಿಯೂ ತಾಲ್ಲೂಕನ್ನು ಬರಪೀಡಿತ ಎಂದು ಘೋಷಿಸಲು ಸರ್ಕಾರ ಹಿಂದೇಟು ಹಾಕುತ್ತಿರುವುದು ಏಕೆ ಎಂಬುದು ಅರ್ಥವಾಗುತ್ತಿಲ್ಲ. ರಾಜಕೀಯ ಬದಿಗಿಟ್ಟು ರೈತರ ಸಂಕಷ್ಟಕ್ಕೆ ಸ್ಪಂದಿಸಬೇಕು. ಕೂಡಲೇ ಬರಪೀಡಿತ ತಾಲ್ಲೂಕು ಎಂದು ಘೋಷಿಸುವುದರ ಜೊತೆಗೆ ಆನೆ-ಮಾನವ ಸಂಘರ್ಷ ನಿಯಂತ್ರಣಕ್ಕೂ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಜಿಲ್ಲಾ ರೈತ ಸಂಘದ ಪ್ರಧಾನ ಕಾರ್ಯದರ್ಶಿ ಬಳ್ಳೂರು ಸ್ವಾಮಿಗೌಡ ಮಾತನಾಡಿ, ಮಲೆನಾಡು ಪ್ರದೇಶದಲ್ಲಿ ಸಾಮಾನ್ಯವಾಗಿ 60 ರಿಂದ 70 ಇಂಚು ಮಳೆಯಾಗುತ್ತಿತ್ತು. ಆದರೆ ಈ ಬಾರಿ ತೀವ್ರ ಬರ ಪರಿಸ್ಥಿತಿ ನಿರ್ಮಾಣವಾಗಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರು ತಾಲ್ಲೂಕಿಗೆ ಭೇಟಿ ನೀಡಿ ಬೆಳೆ ನಷ್ಟವನ್ನು ಪರಿಶೀಲಿಸಿ ಬರಪಟ್ಟಿಗೆ ಸೇರಿಸುವುದಾಗಿ ಭರವಸೆ ನೀಡಿದ್ದರೂ ಈ ವರೆಗೆ ಕ್ರಮ ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಾಫಿ ಬೆಳೆಗಾರರ ಸಂಘದ ಅಧ್ಯಕ್ಷ ವೈ.ಎಸ್.ಸಿದ್ದೇಗೌಡ ಮಾತನಾಡಿ, ತಾಲ್ಲೂಕಿನಲ್ಲಿ ಬಯಲು ನಾಡು ಹಾಗು ಮಲೆನಾಡು ಎರಡೂ ಪ್ರದೇಶಗಳಿದ್ದು, ಮಲೆನಾಡಿನಲ್ಲಿ ಸಾಮಾನ್ಯವಾಗಿ 60ರಿಂದ 70 ಇಂಚು ಮಳೆಯಾಗಬೇಕಾದ ಸಂದರ್ಭದಲ್ಲಿ ಈ ಬಾರಿ ಕೇವಲ 15 ರಿಂದ 18 ಇಂಚಿನಷ್ಟು ಮಳೆಯಾಗಿದೆ. ಬಹುವಾರ್ಷಿಕ ಬೆಳೆಯಾದ ಕಾಫಿ, ಮೆಣಸು ಸೇರಿ ವಿವಿಧ ಬೆಳೆಗಳು ಹಾನಿಗೊಳಗಾಗಿವೆ. ಕಾಫಿ ಉದುರುತ್ತಿದ್ದು, ಮೆಣಸು ಬಳ್ಳಿಗಳು ಒಣಗುತ್ತಿವೆ. ಒಂದು ಬೆಳೆಯನ್ನು ಬೆಳೆಸಿ ಫಲ ಪಡೆಯಲು ರೈತರು ಹಲವು ವರ್ಷಗಳ ಕಾಲ ಶ್ರಮಿಸಬೇಕಾಗುತ್ತದೆ. ಹೀಗಾಗಿ ರೈತರ ನಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಕೂಡಲೇ ಬರಪೀಡಿತ ತಾಲೂಕು ಎಂದು ಘೋಷಿಸಿ ಪರಿಹಾರ ನೀಡಬೇಕೆಂದು ಆಗ್ರಹಿಸಿದರು.

ಮುಂದಿನ ದಿನಗಳಲ್ಲಿ ಕುಡಿಯುವ ನೀರಿಗೂ ಸಮಸ್ಯೆ ಎದುರಾಗುವ ಸಾಧ್ಯತೆಯಿದ್ದು, ಈಗಾಗಲೇ ಹಲವು ಹೊಳೆಗಳಲ್ಲಿ ನೀರಿನ ಹರಿವು ಕ್ಷೀಣಿಸಿದೆ. ಸರ್ಕಾರ ಪರಿಸ್ಥಿತಿಯನ್ನು ಅರಿತು ತಕ್ಷಣ ಸೂಕ್ತ ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಕಾಫಿ ಬೆಳೆಗಾರರ ಸಂಘದ ಕಾರ್ಯದರ್ಶಿ ವೈ.ಡಿ.ಲೋಕೇಶ್, ರೈತ ಸಂಘದ ಕಾರ್ಯದರ್ಶಿ ಮನು, ಬಸವರಾಜು, ಭೂಮೇಶ್, ಶಿವೇಗೌಡ, ಶಿವಶಂಕರ್, ಪುಟ್ಟಸ್ವಾಮಿ, ಮೋಹನ್, ಕೆಆರ್ ಎಸ್ ಪಕ್ಷದ ಅಧ್ಯಕ್ಷ ಆದೇಶ್ ಇತರರಿದ್ದರು.

# ಸಮರ್ಪಕ ಸಾರಿಗೆ ವ್ಯವಸ್ಥೆಗಾಗಿ ಬಸ್ ತಡೆದ ವಿದ್ಯಾರ್ಥಿಗಳು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಆಲೂರು: ಗ್ರಾಮೀಣ ಭಾಗದಲ್ಲಿ ಸಮರ್ಪಕ ಸಾರಿಗೆ ವ್ಯವಸ್ಥೆ ಇಲ್ಲದೆ ಶಾಲಾ ಕಾಲೇಜು ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದು ಹೆಚ್ಚುವರಿ ಬಸ್ ಕಲ್ಪಿಸಬೇಕು ಎಂದು ಆಗ್ರಹಿಸಿ ತಾಲ್ಲೂಕಿನ ಅಡಿಬೈಲು ಗ್ರಾಮದಲ್ಲಿ ಗುರುವಾರ ನೂರಕ್ಕೂ ಅಧಿಕ ವಿದ್ಯಾರ್ಥಿಗಳು ಬಸ್ ತಡೆದು ಪ್ರತಿಭಟನೆ ನಡೆಸಿದರು.

ನಲ್ಲೂರು-ಮಗ್ಗೆ ಮಾರ್ಗದಲ್ಲಿ ಪ್ರಯಾಣಿಕರ ಸಂಖ್ಯೆ ಹೆಚ್ಚಿದೆ. ಅಡಿಬೈಲು, ಭರತೂರು, ಕಲ್ಲಾರೆ, ಕೊಡಗತ್ತೂರು ಸೇರಿ ಸುತ್ತಲಿನ ಇತರ ಹಳ್ಳಿಗಳಿಂದ 30ಕ್ಕೂ ಹೆಚ್ಚು ಮಕ್ಕಳು ಬಸ್ ಅವಲಂಬಿಸಿದ್ದಾರೆ. ಆದರೆ ನಿಡುಗರಹಳ್ಳಿ, ಪಲ್ಲೂರು, ಪುರ, ಸಿಂಗಟಗೂರು ಪ್ರಯಾಣಿಕರೇ ಹತ್ತುವುದರಿಂದ ನಮಗೆ ಜಾಗವೇ ಇರುವುದಿಲ್ಲ. ಬೆಳಿಗ್ಗೆ 7 ಗಂಟೆಗೆ ವಳಲಹಳ್ಳಿ ಮಾರ್ಗದ ಬಸ್ ಇದ್ದರೂ ಅದಕ್ಕೆ ಹತ್ತದೇ ಈ ಬಸ್‌ಗಾಗಿ ಕಾಯುತ್ತಾರೆ. ಬೆಳಿಗ್ಗೆ ಸಮಯದಲ್ಲಿ ಹೆಚ್ಚುವರಿ ಬಸ್ ವ್ಯವಸ್ಥೆ ಮಾಡಿದರೆ ಅನುಕೂಲವಾಗುತ್ತದೆಂದು ವಿದ್ಯಾರ್ಥಿಗಳು ಆಗ್ರಹಿಸಿದರು.

ಕಾಡಾನೆ ಪೀಡಿತ ಪ್ರದೇಶವಾದ್ದರಿಂದ ಕಾಲೇಜಿಗೆ ಹೋಗುವುದೇ ಸಾಹಸದ ಕೆಲಸ. ಹಾಗಿದ್ದರೂ ಜೀವ ಪಣಕ್ಕಿಟ್ಟು ಬಸ್‌ಗಾಗಿ ಕಾದು ನಿಂತಿರುತ್ತೇವೆ. ಆದರೆ ನಿಲ್ಲಲು ಜಾಗವಿಲ್ಲದಷ್ಟು ತುಂಬಿದರೆ ಏನು ಮಾಡುವುದು. ನಲ್ಲೂರು-ಮಗ್ಗೆ ಮಾರ್ಗದ ಬಸ್‌ಗೆ ಆ ವ್ಯಾಪ್ತಿಯ ಮಕ್ಕಳಷ್ಟೇ ಹತ್ತಬೇಕು. ಆ ನಿಟ್ಟಿನಲ್ಲಿ ಅಧಿಕಾರಿಗಳು ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಬೆಳಿಗ್ಗೆ 8 ರಿಂದ 10 ಗಂಟೆ ವರೆಗೆ ಬಸ್ ನಿಲ್ಲಿಸಿದ್ದರಿಂದ ಸಂಚಾರದಲ್ಲಿ ಭಾರೀ ವ್ಯತ್ಯಯವಾಯಿತು. ಇತರ ಪ್ರಯಾಣಿಕರು ತೊಂದರೆ ಅನುಭವಿಸಿದರು. ಬಸ್ ಚಾಲಕ ಮತ್ತು ನಿರ್ವಾಹಕ ಎಷ್ಟೇ ಮನವೊಲಿಸಲು ಪ್ರಯತ್ನಿಸಿದರೂ ವಿದ್ಯಾರ್ಥಿಗಳು ಸಮ್ಮನಾಗಲಿಲ್ಲ. ಕೆಎಸ್‌ಆರ್‌ಟಿಸಿ ಅಧಿಕಾರಿಗಳು ದೂರವಾಣಿ ಕರೆ ಮೂಲಕ ಸಂಪರ್ಕಿಸಿ ಸಮಸ್ಯೆಗೆ ಪರಿಹಾರ ಕಲ್ಪಿಸುವ ಭರವಸೆ ನೀಡಿದ ಬಳಿಕ ಬಸ್ ಹೊರಡಲು ಅನುವು ಮಾಡಿಕೊಟ್ಟರು.

ಆದರೆ ಆಲೂರು ಪಟ್ಟಣಕ್ಕೆ ಬರುತ್ತಿದ್ದಂತೆ ಮತ್ತೊಂದು ಗುಂಪು ಬಸ್ ತಡೆದು ಪ್ರತಿಭಟನೆ ನಡೆಸಿತು. ಎಲ್ಲಾ ಅಡೆತಡೆಗಳನ್ನು ಮೀರಿ ಬಸ್ ಬೆಳಿಗ್ಗೆ 11 ಗಂಟೆಗೆ ಹಾಸನ ತಲುಪಿತು.

# ಗೌರಿ-ಗಣೇಶ ಹಬ್ಬ: ಟೈಮ್ಸ್ ಶಾಲಾ ಮಕ್ಕಳಿಂದ ಬಾಗಿನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಗೌರಿ-ಗಣೇಶ ಹಬ್ಬದ ಅಂಗವಾಗಿ ನಗರದ ವಿಜಯನಗರ ಬಡಾವಣೆಯಲ್ಲಿರುವ ಟೈಮ್ಸ್ ಅಂತರಾಷ್ಟ್ರೀಯ ಶಾಲೆಯ ಮಕ್ಕಳು ಗೌರಿ ಹಾಗೂ ಗಣೇಶ ವೇಷಧಾರಿಗಳಾಗಿ ಸಾರ್ವಜನಿಕ ಸ್ಥಳಗಳಲ್ಲಿ ಸಂಚರಿಸಿ ಹಾಗೂ ಹಿರಿಯರಿಗೆ ಬಾಗಿನ ನೀಡಿ ಎಲ್ಲರ ಮನಸ್ಸು ಗೆದ್ದರು.

ನಗರದ ಪ್ರಮುಖ ಸಾರ್ವಜನಿಕ ಸ್ಥಳಗಳಲ್ಲಿ ಸಂಚರಿಸಿದರು. ಭಾರತೀಯ ಪರಂಪರೆಯಲ್ಲಿ ಹಬ್ಬಗಳೆಂದರೆ ಕೇವಲ ಆಚರಣೆಗಳಷ್ಟೇ ಅಲ್ಲ, ಅದೊಂದು ಭಾವನೆಗಳ ಬೆಸುಗೆ, ಸೌಹಾರ್ದತೆಯ ಸಂಕೇತ. ಪ್ರತಿಯೊಂದು ಆಚರಣೆಯು ಒಂದಲ್ಲಾ ಒಂದು ನಂಬಿಕೆಯ ಅಡಿಪಾಯದಲ್ಲಿ ಆಚರಿಸಲ್ಪಡುತ್ತವೆ. ಕೆಟ್ಟದ್ದರ ಮೇಲೆ ಒಳ್ಳೆಯದರ ಗೆಲುವು, ಅಜ್ಞಾನದ ಮೇಲೆ ಜ್ಞಾನದ ವಿಜಯ, ಹೊಸ ವರ್ಷ ಹೊಸ ಪಸಲಿನ ಸುಗ್ಗಿ ಹರುಷದ ಹಾದಿ, ಪವಿತ್ರ ತ್ಯಾಗ, ಕೃತಜ್ಞತೆಯ ಭಾವ. ಹೀಗೆ ನೂರಾರು ವೈಶಿಷ್ಟ್ಯವು ಬೀದಿಬೀದಿಗಳಲ್ಲಿ, ಮನೆ ಮನೆಗಳಲ್ಲಿ ತುಂಬುವ ಸಂಸ್ಕೃತಿ ನಮ್ಮದು. ಆಧುನಿಕತೆ ವಿದ್ಯಮಾನಗಳಲ್ಲಿ ಮರೆಯಾಗುತ್ತಿರುವ ಸಂಪ್ರದಾಯದ ಆಚರಣೆ ಹಾಗೂ ಕೃತಕತೆಯ ರೂಪ ಪಡೆಯುತ್ತಿರುವ ಮನಸುಗಳಿಗೆ ಭಾದ್ರಪದ ಮಾಸದ ಶುಕ್ಲ ಪಕ್ಷದ ತದಿಗೆಯಂದು ಗೌರಿ ಹಬ್ಬ ಮತ್ತು ಚತುರ್ಥಿಯೆಂದು ಗಣೇಶ ಚತುರ್ಥಿಯ ಸಂಭ್ರಮಾಚರಣೆ ಮಾಡಲಾಗುತ್ತಿದೆ. ಹಬ್ಬದ ಪ್ರಮುಖ ಆಚರಣೆ ಬಾಗಿನ ನೀಡಿ ಗೌರಿಯನ್ನು ಬಳಬೆಳಗಿಕೊಳ್ಳುವ, ಸೌಭಾಗ್ಯವನ್ನು ಬೇಡುವ ಅತ್ಯಂತ ಮಹತ್ವದ ಹಬ್ಬ ಆಚರಣೆಯನ್ನು ವಿದ್ಯಾರ್ಥಿಗಳು ಪಟ್ಟಣದ ಕೇಂದ್ರ ಮಾರುಕಟ್ಟೆಗೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ತೆರಳಿ ಸೌಭಾಗ್ಯದ ಸಂಕೇತ, ಸಮೃದ್ಧಿ ಹಾಗೂ ಕೃತಜ್ಞತೆಯ ಪ್ರತೀಕವಾದ ಅಕ್ಕಿ, ಬೇಳೆ, ಬೆಲ್ಲ, ಅರಿಶಿನ, ಕುಂಕುಮ, ಬಳೆ, ತೆಂಗಿನ ಕಾಯಿ ತರಕಾರಿ ತುಂಬಿದ ಎರಡು ಮೊರಗಳ ಬಾಗಿನವನ್ನು ವಿದ್ಯಾರ್ಥಿಗಳು ಹಿರಿಯ ಕಿರಿಯರ ನಡುವೆ ಪ್ರೀತಿ, ಗೌರವ ಮತ್ತು ಬಾಂದವ್ಯ ವೃದ್ಧಿಸುವ ಪ್ರತೀಕವಾಗಿ ಬಾಗಿನ ರೂಪದಲ್ಲಿ ನೀಡಿ ಹಬ್ಬದ ಶುಭಾಶಯಗಳು ಕೋರಿ ಅವರಿಂದ ಆಶೀರ್ವಾದ ಪಡೆದ ಕ್ಷಣ ಅತ್ಯಂತ ಮಹತ್ತರವಾದ ಕ್ಷಣವಾಗಿತ್ತು. ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ಮಾಡಿದ ಗಣೇಶನನ್ನು ತ್ಯಜಿಸಿ ಪರಿಸರ ಸ್ನೇಹಿ ಗಣೇಶನನ್ನು ಬರಮಾಡಿಕೊಳ್ಳಿ. ಸ್ಥಳೀಯ ಕುಶಲಕರ್ಮಿಗಳನ್ನು ಪ್ರೋತ್ಸಾಹಿಸಿ ಎನ್ನುವ ಮಹತ್ತರವಾದ ಸಂದೇಶವನ್ನು ನೀಡುತ್ತಾ ಶಾಲಾ ಗಣೇಶೋತ್ಸವವನ್ನು ಶಾಲಾ ಮಕ್ಕಳು ಅತ್ಯಂತ ಮಹತ್ವಪೂರ್ಣವಾಗಿ ಆಚರಿಸಿದರು.

# ಧರ್ಮ ಜಾಗೃತಿ ಸಮಾವೇಶಕ್ಕೆ ಸಕಲ ಧರ್ಮಿಯರ ಸಹಕಾರ ಅಗತ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಬೇಲೂರು: ಸೆ. 30 ಹಾಗೂ ಅ. 1ರಂದು ನಡೆಯಲಿರುವ ಉಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ್ವರ ಶ್ರೀ 1008 ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಭಗವತ್ಪಾದರ ಅಡ್ಡಪಲ್ಲಕ್ಕಿ ಉತ್ಸವ ಹಾಗೂ ಧರ್ಮ ಜಾಗೃತಿ ಸಮಾವೇಶವನ್ನು ಸರ್ವ ಧರ್ಮಿಯರ ಸಹಭಾಗಿತ್ವದೊಂದಿಗೆ ಆಚರಿಸಬೇಕು ಎಂದು ತೆಂಕಲಗೂಡು ಬೃಹನ್ಮಠ, ಯಸಳೂರಿನ ಶ್ರೀ ಷ.ಬ್ರ. ಚನ್ನಸಿದ್ದೇಶ್ವರ ಸ್ವಾಮೀಜಿ ಹೇಳಿದರು.

ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಧರ್ಮದ ಮೂಲ ಆಶಯ ಮನುಷ್ಯನಲ್ಲಿ ಉತ್ತಮ ಸಂಸ್ಕಾರ, ಪರಸ್ಪರ ಗೌರವ, ಸಹಬಾಳ್ವೆ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವುದಾಗಿದೆ.

ಯಾವುದೇ ಧರ್ಮವಾಗಲಿ, ಮನುಷ್ಯರಲ್ಲಿ ಶಾಂತಿ, ಪ್ರೀತಿ ಮತ್ತು ಸೌಹಾರ್ದತೆ ಬೆಳೆಸುವ ಸಂದೇಶವನ್ನು ನೀಡುತ್ತದೆ. ಆದ್ದರಿಂದ ಧರ್ಮದ ಹೆಸರಿನಲ್ಲಿ ಭೇದಭಾವಕ್ಕೆ ಅವಕಾಶ ನೀಡದೆ, ಪರಸ್ಪರ ಗೌರವದಿಂದ ಬದುಕುವ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದರು.

ಜಗದ್ಗುರುಗಳ ಅಡ್ಡ ಪಲ್ಲಕ್ಕಿ ಉತ್ಸವ ಹಾಗೂ ಧರ್ಮ ಜಾಗೃತಿ ಕಾರ್ಯಕ್ರಮವು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದ ಕಾರ್ಯಕ್ರಮವಲ್ಲ.

ಬೇಲೂರಿನ ಸೌಹಾರ್ದತೆ, ಸಂಸ್ಕೃತಿ ಮತ್ತು ಆಧ್ಯಾತ್ಮಿಕ ಪರಂಪರೆಯನ್ನು ಪ್ರತಿಬಿಂಬಿಸುವ ಕಾರ್ಯಕ್ರಮವಾಗಿ ಇದನ್ನು ಯಶಸ್ವಿಗೊಳಿಸುವ ಜವಾಬ್ದಾರಿ ಎಲ್ಲರದ್ದಾಗಿದೆ ಎಂದು ಹೇಳಿದರು.

ಯುವ ಜನರಲ್ಲಿ ಉತ್ತಮ ಚಿಂತನೆ, ಸಂಸ್ಕಾರ ಮತ್ತು ಸಾಮಾಜಿಕ ಹೊಣೆಗಾರಿಕೆಯನ್ನು ಬೆಳೆಸುವ ನಿಟ್ಟಿನಲ್ಲಿ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಮಹತ್ವದ ಪಾತ್ರ ವಹಿಸುತ್ತವೆ. ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಪರಸ್ಪರ ವಿಶ್ವಾಸವನ್ನು ಮತ್ತಷ್ಟು ಬಲಪಡಿಸುವಂತಹ ವಾತಾವರಣ ನಿರ್ಮಾಣವಾಗಬೇಕು ಎಂದು ಸ್ವಾಮೀಜಿ ಆಶಿಸಿದರು.

ಸೆ.30ರಂದು ಅಡ್ಡ ಪಲ್ಲಕ್ಕಿ ಉತ್ಸವ ಹಾಗೂ ಇಷ್ಟಲಿಂಗ ಮಹಾಪೂಜೆ ಸೇರಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿದ್ದು, ಅ.1ರಂದು ಧರ್ಮ ಜಾಗೃತಿ ಸಮಾವೇಶ, ಶಿವ ದೀಕ್ಷಾ ಕಾರ್ಯಕ್ರಮ ಹಾಗೂ ವಧುವರರ ಸಮಾವೇಶ ನಡೆಯಲಿದೆ. ಶ್ರೀ ಶಿವಕುಮಾರ ಸ್ವಾಮೀಜಿ ಸಮುದಾಯ ಭವನ, ಬೇಲೂರು ಕಾರ್ಯಕ್ರಮಕ್ಕೆ ವೇದಿಕೆಯಾಗಲಿದೆ.

ಬೇಲೂರು ತಾಲೂಕು ಸೇರಿದಂತೆ ಸುತ್ತಲಿನ ಗ್ರಾಮಗಳ ಭಕ್ತರು, ಸಾರ್ವಜನಿಕರು ಹಾಗೂ ವಿವಿಧ ಧರ್ಮೀಯರು ಸೌಹಾರ್ದತೆಯಿಂದ ಕಾರ್ಯಕ್ರಮಯಶಸ್ವಿಗೊಳಿಸಬೇಕು ಎಂದು ಸ್ವಾಮೀಜಿ ಮನವಿ ಮಾಡಿದರು.

ತಾಲ್ಲೂಕು ವೀರಶೈವ ಪುರೋಹಿತ ಟ್ರಸ್ಟ್‌ನವರು ಸೇರಿದಂತೆ ವೀರಶೈವ ಮುಖಂಡರು, ಸಮುದಾಯದವರು ಇದ್ದರು.

# ಕೇಂದ್ರದ ಒಪ್ಪಿಗೆಗೂ ಮೊದಲೇ ನಿಂದ ಮೆಟ್ರೋ 3ನೇ ಹಂತದ ಯೋಜನೆಯ ಪೂರ್ವಭಾವಿ ಕೆಲಸ ಆರಂಭ!

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ನಮ್ಮ ಮೆಟ್ರೋದ 3ನೇ ಹಂತಕ್ಕೆ ಕೇಂದ್ರದ ಒಪ್ಪಿಗೆ ಬಾಕಿ ಇರುವಾಗಲೇ ಯೋಜನೆಯ ಕಾಮಗಾರಿ ಆರಂಭಿಸಲು ಬೆಂಗಳೂರು ಮೆಟ್ರೋ ರೈಲು ನಿಗಮವು ಅಗತ್ಯ ಪ್ರಕ್ರಿಯೆಗಳನ್ನು ಆರಂಭಿಸಿದ್ದು, ಸಂಪೂರ್ಣ ಹಾಗೂ ಭಾಗಶಃ ಕಟ್ಟಡ ತೆರವಿಗೆ ಮುಂದಾಗಿದೆ.

2024ರಲ್ಲಿ ಕೇಂದ್ರವು ಯೋಜನೆಗೆ ಅನುಮೋದಿಸಿದ್ದರೂ ಡಬಲ್ ಡೆಕ್ಕರ್ ಕಾರಣಕ್ಕಾಗಿ ಅಂತಿಮ ಅನುಮೋದನೆ ಸಿಕ್ಕಿಲ್ಲ. ಸಂಪೂರ್ಣ ಒಪ್ಪಿಗೆ ಸಿಕ್ಕ ಬಳಿಕ ಎಲ್ಲ ಕಾಮಗಾರಿ ಆರಂಭಿಸಿದಲ್ಲಿ ಯೋಜನೆ ವಿಳಂಬ, ವೆಚ್ಚ ಹೆಚ್ಚಳದಂತ ತೊಂದರೆ ತಪ್ಪಿಸಿಕೊಳ್ಳಲು ಪೂರ್ವಭಾವಿ ಕಾಮಗಾರಿ ಆರಂಭಿಸುತ್ತಿದೆ.



ಬಿಎಂಆರ್‌ಸಿಎಲ್ ಹಂತ 3ಕ್ಕಾಗಿ ನಾಲ್ಕು ವಿಭಿನ್ನ ಪ್ಯಾಕೇಜ್‌ಗಳಲ್ಲಿ ಕಟ್ಟಡಗಳು ಮತ್ತು ಭಾಗಗಳನ್ನು ಸಂಪೂರ್ಣವಾಗಿ ಅಥವಾ ಭಾಗಶಃ ಕೆಡವಲು, ತೆರವುಗೊಳಿಸಲು 17.57 ಕೋಟಿ ರೂ. ವೆಚ್ಚದಲ್ಲಿ ಟೆಂಡರ್ ಗಳನ್ನು ಕರೆದಿದೆ. ಒಂದು ವರ್ಷದಲ್ಲಿ ತೆರವು ಪೂರ್ಣಗೊಳಿಸಿಕೊಳ್ಳಲು ಸಂಸ್ಥೆ ನಿರ್ಧರಿಸಿದೆ. ಜತೆಗೆ, ಇದೇ ಸಮಯದಲ್ಲಿ, ಭೂಸ್ವಾಧೀನ ಮತ್ತು ವಿದ್ಯುತ್ ಲೈನ್ ಜಲಮಂಡಳಿಯ ಪೈಪ್‌ಲೈನ್ ಸೇರಿ ಇತರೆ ಸೌಲಭ್ಯಗಳ ಸ್ಥಳಾಂತರ ಸೇರಿದಂತೆ ಪೂರ್ವಭಾವಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುತ್ತಿದೆ.

# ಇತಿಹಾಸದಲ್ಲಿ ಈ ದಿನ

## ಸೆಪ್ಟೆಂಬರ್-12

1897: ಸಾರಾಗಢಿ ಕದನ ನಡೆಯಿತು. ಸುಮಾರು 21 ಸಿಖ್ ಸೈನಿಕರು ಸಾವಿರಾರು ಆಫ್ಘನ್ ದಾಳಿಕೋರರ ವಿರುದ್ಧ ವೀರಾವೇಶದಿಂದ ಹೋರಾಡಿದರು. ಈ ಕದನವನ್ನು ಸೈನಿಕ ಇತಿಹಾಸದ ಅತ್ಯಂತ ಗಮನಾರ್ಹ ಶೌರ್ಯಗಾಥೆಗಳಲ್ಲಿ ಒಂದಾಗಿ ಪರಿಗಣಿಸಲಾಗುತ್ತದೆ.

1940: ಫ್ರಾನ್ಸ್‌ನ ಲಾಸ್ಕೋ ಗುಹೆಯ ಸುಮಾರು 17,000 ವರ್ಷಗಳಷ್ಟು ಹಳೆಯ ಗುಹಾಚಿತ್ರಗಳು ಪತ್ತೆಯಾದವು.

1948: ಹೈದರಾಬಾದ್ ಸಂಸ್ಥಾನದ ವಿರುದ್ಧ ಭಾರತೀಯ ಸೇನೆಯ ಆಪರೇಷನ್ ಪೋಲೊ ಕಾರ್ಯಾಚರಣೆ ಆರಂಭವಾಯಿತು.

1953: ಅಮೆರಿಕದ ಭವಿಷ್ಯದ ಅಧ್ಯಕ್ಷ ಜಾನ್ ಎಫ್. ಕೆನಡಿ ಮತ್ತು ಜಾಕ್ವೆಲಿನ್ ಬುವಿಯೆ ವಿವಾಹವಾದರು.

1958: ಜ್ಯಾಕ್ ಕಿಲ್ಬಿ ಮೊದಲ ಕಾರ್ಯನಿರ್ವಹಿಸುವ ಸಮಗ್ರ ವಿದ್ಯುನ್ಮಾನ ಮಂಡಲವನ್ನು ಪ್ರದರ್ಶಿಸಿದರು. ಇದು ಆಧುನಿಕ ಗಣಕ ಮತ್ತು ಎಲೆಕ್ಟ್ರಾನಿಕ್ಸ್ ಕ್ಷೇತ್ರದ ಬೆಳವಣಿಗೆಗೆ ಮಹತ್ವದ ಹೆಜ್ಜೆಯಾಯಿತು.

1959: ಸೋವಿಯತ್ ಒಕ್ಕೂಟದ ಲೂನಾ2 ಚಂದ್ರನ ಮೇಲ್ಮೈ ತಲುಪಿತು. ಚಂದ್ರನನ್ನು ತಲುಪಿದ ಮೊದಲ ಮಾನವ ನಿರ್ಮಿತ ಅಂತರಿಕ್ಷ ನೌಕೆಯಾಯಿತು.

1962: ಅಮೆರಿಕ ಅಧ್ಯಕ್ಷ ಜಾನ್ ಎಫ್. ಕೆನಡಿ ಚಂದ್ರನಿಗೆ ಮಾನವನನ್ನು ಕಳುಹಿಸುವ ಅಮೆರಿಕದ ಗುರಿಯನ್ನು ಪುನರುಚ್ಚರಿಸಿದರು.

1992: ಮೇ ಜಮಿಸನ್ ಅಂತರಿಕ್ಷಕ್ಕೆ ತೆರಳಿದ ಮೊದಲ ಕಪ್ಪು ವರ್ಣದ ಮಹಿಳೆಯಾದರು.

### ಜನನ

1913: ಜೆಸ್ಸಿ ಓವೆನ್ಸ್, ಪ್ರಸಿದ್ಧ ಅಮೆರಿಕನ್ ಅಥ್ಲೀಟ್

1980: ಯಾವೊ ಮಿಂಗ್ ಚೀನಾದ ಖ್ಯಾತ ಬ್ಯಾಸ್ಕೆಟ್‌ಬಾಲ್ ಆಟಗಾರ

1944: ಬ್ಯಾರಿ ವೈಟ್, ಖ್ಯಾತ ಅಮೆರಿಕನ್ ಗಾಯಕ

### ನಿಧನ

2003: ಜಾನಿ ಕ್ಯಾಶ್, ಪ್ರಸಿದ್ಧ ಅಮೆರಿಕನ್ ಗಾಯಕ ಮತ್ತು ಗೀತ ರಚನೆಕಾರ

2009: ನಾರ್ಮನ್ ಬೋರ್ಲಾಗ್, ಕೃಷಿ ವಿಜ್ಞಾನಿ, ನೊಬೆಲ್ ಪ್ರಶಸ್ತಿ ಪುರಸ್ಕೃತರು

# ಸಂಚಾರ ದಟ್ಟಣೆ ತಗ್ಗಿಸಲು ಬೆಂಗಳೂರು ರಸ್ತೆಗೆ 25 ಫ್ಲೈಓವರ್



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ಶರವೇಗದಲ್ಲಿ ಬೆಳೆಯುತ್ತಿರುವ ಮಹಾನಗರದಲ್ಲಿ ವಾಹನಗಳ ಸಂಖ್ಯೆ 1.50 ಕೋಟಿ ತಲುಪಿದ್ದು, ಸಂಚಾರ ದಟ್ಟಣೆ ಸಮಸ್ಯೆ ಜಟಿಲವಾಗುತ್ತಲೇ ಇದೆ. ಈ ಹಿನ್ನೆಲೆಯಲ್ಲಿ ಸಂಚಾರ ಪೊಲೀಸರು ಹೊಸದಾಗಿ ಮತ್ತಷ್ಟು ಮೇಲ್ಸೇತುವೆ, ಅಂಡರ್‌ಪಾಸ್‌ಗಳ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಿದ್ದಾರೆ.

ನಗರದಲ್ಲಿ ಸದ್ಯ 42 ಮೇಲ್ಸೇತುವೆಗಳು, 28 ಅಂಡರ್‌ಪಾಸ್‌ಗಳಿವೆ. ಇದಲ್ಲದೆ, ಹಲವೆಡೆ ಅಂಡರ್‌ಪಾಸ್, ಮೇಲ್ಸೇತುವೆಗಳ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. ಸಾರ್ವಜನಿಕರ ಸುಗಮ ಸಂಚಾರಕ್ಕೆ ಮೆಟ್ರೋ ಜಾಲವನ್ನು ವಿಸ್ತರಿಸಲಾಗಿದೆ. ಸಮೂಹ ಸಾರಿಗೆಯನ್ನೂ ಹೆಚ್ಚಿಸಲಾಗಿದೆ. ರಸ್ತೆಗಳನ್ನೂ ವಿಸ್ತರಿಸಲಾಗುತ್ತಿದೆ. ಆದಾಗ್ಯೂ, ಟ್ರಾಫಿಕ್‌ಜಾಮ್ ಸಮಸ್ಯೆ ಬಿಡಿಸಲಾಗದ ಕಗ್ಗಂಟಾಗುತ್ತಲೇ ಇದೆ.

ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ವಾಹನಗಳ ಸಂಖ್ಯೆ, ಕಿರಿದಾದ ರಸ್ತೆಗಳು, ರಸ್ತೆ ಕಾಮಗಾರಿಗಳು, ಅಸಮರ್ಪಕ ಪಾರ್ಕಿಂಗ್ ಹಾಗೂ ಸಾರ್ವಜನಿಕ ಸಾರಿಗೆಯ ಮೇಲಿನ ಕಡಿಮೆ ಅವಲಂಬನೆ ನಗರದಲ್ಲಿ ಸಂಚಾರ ದಟ್ಟಣೆಯನ್ನು ಮತ್ತಷ್ಟು ಗಂಭೀರಗೊಳಿಸುತ್ತಿವೆ. ಸಿಲ್ಕ್ ಬೋರ್ಡ್, ಎಲೆಕ್ಟ್ರಾನಿಕ್ ಸಿಟಿ, ಮಾರತ್ತಹಳ್ಳಿ, ವೈಟ್‌ಫೀಲ್ಡ್, ಹೆಬ್ಬಾಳ, ಕೆ.ಆರ್.ಪುರ, ಬನ್ನೇರುಘಟ್ಟ ರಸ್ತೆ, ತುಮಕೂರು ರಸ್ತೆ ಹಾಗೂ ಮೈಸೂರು ರಸ್ತೆ ಸೇರಿದಂತೆ ಇತರೆಡೆ ವಾಹನ ಸವಾರರು ಗಂಟೆಗಟ್ಟಲೆ ಟ್ರಾಫಿಕ್‌ನಲ್ಲಿ ಸಿಲುಕಿ ಒದ್ದಾಡುವುದು ಸರ್ವೇ ಸಾಮಾನ್ಯವಾಗಿದೆ.

# ನೆಮ್ಮದಿಯ ಜೀವನಕ್ಕೆ ಅರಣ್ಯ ಇಲಾಖೆ ಶ್ರಮ ಕಾರಣ

## ಹಾಸನದಲ್ಲಿ ಅರಣ್ಯ ಇಲಾಖೆ ಹುತಾತ್ಮರ ದಿನಾಚರಣೆ | ಜಿಲ್ಲಾ ನ್ಯಾಯಾಧೀಶೆ ಹೇಮಾವತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಪರಿಸರವನ್ನು ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುವುದು ಅರಣ್ಯ ಇಲಾಖೆ, ಎಲ್ಲರೂ ನೆಮ್ಮದಿಯಿಂದ ಜೀವನ ನಡೆಸುತ್ತಿದ್ದೇವೆ ಎಂದರೆ ನಮ್ಮೆಲ್ಲರನ್ನು ಪ್ರತಿನಿತ್ಯ ಕಾಯುವ ಯೋಧರು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಪೊಲೀಸ್ ಇಲಾಖೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಹೇಮಾವತಿ ತಿಳಿಸಿದರು.

ನಗರದ ಅರಣ್ಯ ಭವನದಲ್ಲಿ ಶುಕ್ರವಾರ ಏರ್ಪಡಿಸಿದ್ದ ಅರಣ್ಯ ಇಲಾಖೆ ಹುತಾತ್ಮರ ದಿನಾಚರಣೆಯಲ್ಲಿ ಮಾತನಾಡಿ, ನಮ್ಮ ಕೆಲಸದಿಂದ ದೇಶಕ್ಕೆ ಸಮರ್ಪಿಸಿಕೊಳ್ಳುತ್ತೇವೆ ಎಂದರೆ ಅದು ಘೋಷಣೆ ಇದ್ದಹಾಗೆ, ಪ್ರಕೃತಿಯೊಂದಿಗೆ ಹೋರಾಟ ಮಾಡುವುದು ಸುಲಭವಾದ ಕೆಲಸವಲ್ಲ ಎಂದು ತಿಳಿಸಿದರು.

ಅರಣ್ಯ ಸಂಪತ್ತು, ವನ್ಯಜೀವಿಗಳನ್ನು ಕಾಪಾಡುವ ಸಮಯದಲ್ಲಿ ಅರಣ್ಯ ಇಲಾಖೆಯವರು ಯಾವುದೇ ರೀತಿಯ ಶಸ್ತ್ರಾಗಳನ್ನು ಹೊಂದಿರುವುದು ತುಂಬಾ ಕಡಿಮೆ ಎಂದು ಅವರು ಪ್ರಾಣಿ ಹತ್ಯೆ ಮಾಡುವುದನ್ನು ಎಲ್ಲರೂ ಖಂಡಿಸುತ್ತೇವೆ, ಇದು ಅರಣ್ಯ ಇಲಾಖೆಯವರಿಗೆ ಕಷ್ಟಕರವಾದ ಕೆಲಸವಾಗಿರುತ್ತದೆ. ನಮ್ಮ ದೇಶಕ್ಕಾಗಿ ಹುತಾತ್ಮರಾಗಿರುವ ದಿನಾಚರಣೆಯನ್ನು ಆಚರಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದರು.

ಹಾಸನ ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ ಏಡುಕೊಂಡಲು ಮಾತನಾಡಿ, ಭಾರತದಲ್ಲಿ ಶೇ.30 ರಷ್ಟು ಪ್ರಕೃತಿ ಸಂಪತ್ತು, ವನ್ಯ ಜೀವಿ ಸಂಪತ್ತು, ಅರಣ್ಯ ಸಂಪತ್ತು, ನದಿ ಮೂಲಗಳನ್ನು ಕಾಪಾಡುವಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ಅವರು ಕಾರಣವಾಗಿದ್ದಾರೆ ಎಂದು ತಿಳಿಸಿದರು.

ಅರಣ್ಯ ಸಿಬ್ಬಂದಿ ಅರಣ್ಯ ರಕ್ಷಣೆ ಮತ್ತು ವನ್ಯಜೀವಿ ರಕ್ಷಣೆ ಮಾಡುವ ಸಮಯದಲ್ಲಿ ಬದ್ಧತೆಯಿಂದ ಪಾಲ್ಗೊಳ್ಳುತ್ತಾರೆ. ಅರಣ್ಯ ಇಲಾಖೆಯಲ್ಲಿ ಅರಣ್ಯ ರಕ್ಷಣೆ ಮತ್ತು ವನ್ಯಜೀವ ರಕ್ಷಣೆ ಮಾಡುವಾಗ ಯಾವುದೇ ರ್‍ಯಾಂಕ್ ಇಲ್ಲ. ವೈಯಕ್ತಿಕ ಜವಾಬ್ದಾರಿಯಿಂದ 24 ಗಂಟೆಯೂ ಸಹ ರಕ್ಷಣೆ ಕರ್ತವ್ಯ ನಿರ್ವಹಿಸುತ್ತಾರೆ ಎಂದು ಹೇಳಿದರು.

ಅರಣ್ಯ ಸಂಪತ್ತು ಮತ್ತು ವನ್ಯಜೀವಿ ಸಂಪತ್ತು ರಕ್ಷಿಸುವಲ್ಲಿ ಹಲವು ರೀತಿಯ ಸವಾಲುಗಳಿವೆ, ಕೆಲವು ಕಾರಣಗಳಿಂದ ಪ್ರಕೃತಿ ವಿಕೋಪಗಳು ಆಗುತ್ತಿರುವುದನ್ನು ನೋಡುತ್ತಿದ್ದೇವೆ. ಇನ್ನೂ ಮುಂದೆ ವಿಪರೀತವಾಗಿ ಪ್ರಕೃತಿ ವಿಕೋಪಗಳು ಆಗುವ ಸಾಧ್ಯತೆ ಇದೆ ಎಂದ ಅವರು ಎಲ್ ನೀನೋ ಪರಿಣಾಮದಿಂದ ಇದುವರೆಗೆ ಶೇ.40 ರಷ್ಟು ಮಳೆಯಾಗಿಲ್ಲ, ಎಲ್ ನೀನೊ ಗೆ ಪ್ರಮುಖ ಕಾರಣವೆಂದರೆ ಪ್ರಕೃತಿಯನ್ನು ನಾಶ ಮಾಡಿರುವುದು ಎಂದರು.

ವಿವಿಧ ಇಲಾಖೆಯ ಆಡಳಿತದಲ್ಲಿ ಅರಣ್ಯ ಸಂಪತ್ತು ಮತ್ತು ವನ್ಯಜೀವಿಗಳಿಗೆ ಸಂಬಂಧಪಟ್ಟ ಪಾತ್ರ ಕಡಿಮೆ ಇದೆ. ನಾವು ಒಂದು ನಿರ್ದಿಷ್ಟ ಗುರಿ ಇಟ್ಟುಕೊಳ್ಳಬೇಕು, ವಿವಿಧ ಇಲಾಖೆಯ ನೌಕರರು, ಜನಪ್ರತಿನಿಧಿಗಳು, ನ್ಯಾಯಾಲಯಗಳು ಮತ್ತು ಸಾರ್ವಜನಿಕರು ಒಟ್ಟಾಗಿ ಕೆಲಸ ಮಾಡುವ ಮೂಲಕ ಅರಣ್ಯ ಇಲಾಖೆಗೆ ಸಹಕಾರ ನೀಡಿದರೆ ಕೆಲಸ ಸುಲಭವಾಗುತ್ತದೆ ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿ ಜಿ.ಕೆ. ದಾಕ್ಷಾಯಿಣಿ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಸೌರಭ್ ಕುಮಾರ್, ಸಾಮಾಜಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಟಿ.ಎಂ. ಸಹನಕುಮಾರ, ಅರಣ್ಯ ಸಂಚಾರಿ ದಳದ ಉಪ ಅರಣ್ಯ ಸಂರಕ್ಷಣಾಧಿಕಾರಿ ಕಾವ್ಯಶ್ರೀ ಮತ್ತಿತರರಿದ್ದರು.

# ಕ್ಷುಲ್ಲಕ ಕಾರಣಕ್ಕೆ ವ್ಯಕ್ತಿ ಮೇಲೆ ಮಾರಣಾಂತಿಕ ಹಲ್ಲೆ

ಸಕಲೇಶಪುರ: ತಾಲ್ಲೂಕಿನ ಮಾಸುವಳ್ಳಿಯಲ್ಲಿ ನಲ್ಲಿ ನೀರು ಬಿಡಲಿಲ್ಲ ಎಂದು ಗ್ರಾಮ ಪಂಚಾಯಿತಿ ಮಾಜಿ ಸದಸ್ಯರ ಮೇಲೆ ಯುವಕ ಮಾರಣಾಂತಿಕ ಹಲ್ಲೆ ನಡೆಸಿದ್ದಾನೆ.

ಗ್ರಾಮದ ಗಿಡ್ಡೇಗೌಡ ಗಾಯಾಳು. ಗಿರೀಶ್ ಹಾಗೂ ಆತನ ತಾಯಿ ಜಯಮ್ಮ ಆರೋಪಿಗಳು. ಗುರುವಾರ ಬೆಳಿಗ್ಗೆ 9ರ ಸಮಯದಲ್ಲಿ ಜಯಮ್ಮ ಗ್ರಾಮ ಪಂಚಾಯಿತಿ ನೀರು ಸರಬರಾಜು ಮೋಟಾರ್ ಬಳಿ ಬಂದು ಗಿಡ್ಡೇಗೌಡರ ಹೆಂಡತಿ ಹೇಮಾ ಅವರಿಗೆ ನೀರು ಬಿಡುವಂತೆ ಕೇಳಿದ್ದಾರೆ. ಆಗ ಹೇಮಾ, ಮೋಟಾರ್ ಆನ್ ಮಾಡಿದ್ದೆ, ಪೈಪ್ ಒಡೆದಿರುವುದರಿಂದ ನೀರು ಬರುತ್ತಿಲ್ಲವೆಂದು ಹೇಳಿದ್ದರು ಎನ್ನಲಾಗಿದೆ.

ಅಷ್ಟಕ್ಕೆ ಕೋಪಗೊಂಡ ಜಯಮ್ಮ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ವಾಗ್ವಾದ ಜೋರಾಗುತ್ತಿದ್ದಂತೆ ಸ್ಥಳಕ್ಕೆ ಗಿಡ್ಡೇಗೌಡ ಹಾಗೂ ಗಿರೀಶ್ ಬಂದಿದ್ದು ಇಬ್ಬರ ನಡುವೆ ಜೋರು ವಾಗ್ವಾದ ನಡೆದಿದೆ. ಕೆಲ ಹೊತ್ತಿನ ಬಳಿಕ ಗಿರೀಶ್ ಹಾಗೂ ಜಯಮ್ಮ ಮಚ್ಚು ಹಿಡಿದುಕೊಂಡು ಬಂದು ಗಿಡ್ಡೇಗೌಡರ ಜೊತೆಗೆ ಜಗಳ ಶುರು ಮಾಡಿದ್ದಾರೆ. ಮಾತಿಗೆ ಮಾತು ಬೆಳೆದು ಪರಿಸ್ಥಿತಿ ವಿಕೋಪಕ್ಕೆ ತಿರುಗಿ ಮಚ್ಚಿನಿಂದ ಗಿಡ್ಡೇಗೌಡರ ಮೇಲೆ ಹಲ್ಲೆಗೆ ಮುಂದಾಗಿದ್ದಾನೆ. ತಕ್ಷಣವೇ ಎಚ್ಚೆತ್ತ ಅವರು ಬಲಗೈ ನೀಡಿದ್ದರಿಂದ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಕೂಡಲೇ ಅವರನ್ನು ಸ್ಥಳೀಯರು ಪಟ್ಟಣದ ಕ್ರಾಫರ್ಡ್ ಆಸ್ಪತ್ರೆಗೆ ದಾಖಲಿಸಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248